# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ **2018** (Karnataka Farmer Producer Organizations (FPOs) Policy 2018).

ಓದಲಾಗಿದೆ

1. 2018ರ ಜುಲೈ ಆಯವ್ಯಯಭಾಷಣ ಕಂಡಿಕೆ ಸಂಖ್ಯೆ: 21
2. ಸರ್ಕಾರದ ಆದೇಶಸಂಖ್ಯೆ: ಕೃಇ 75 ಕೃಉಇ 2017, ಬೆಂಗಳೂರು. ದಿನಾಂಕ: 21-04-2018.
3. ದಿನಾಂಕ: 01.03.2018ರಂದು ನಡೆದ ಕಾರ್ಯಾಗಾರದ ನಡವಳಿ
4. ದಿನಾಂಕ: 10.08.2018ರಂದು ನಡೆದ ಸಭೆಯ ನಡವಳಿ
5. ದಿನಾಂಕ: 30.08.2018ರಂದು ನಡೆದ ಕಾರ್ಯಾಗಾರ ನಡವಳಿ
6. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ: WDD/PC/FPO/01/2018-19, ದಿನಾಂಕ: 03.10.2018 ಮತ್ತು ದಿನಾಂಕ: 15.11.2018.

## ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ 2018ರ ಜುಲೈ ಆಯವ್ಯಯ ಭಾಷಣದಲ್ಲಿ, "ರೈತರನ್ನು ಸಂಘಟಿಸಿ ಅವರ ಉತ್ಪಾದಕತೆಯನ್ನು ಹೆಚ್ಚಿಸುವುದಲ್ಲದೇ ಅವರು ಬೆಳೆದಂತಹ ಕೃಷಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ರೈತ ಉತ್ಪಾದಕ ಸಂಸ್ಥೆಗಳನ್ನು ರಚಿಸಿ, ಈ ಉತ್ಪಾದಕ ಸಂಸ್ಥೆಗಳ ಮೂಲಕ ಗುಣಮಟ್ಟದ ಪರಿಕರ, ಕೃಷಿ ಯಂತ್ರಧಾರೆ, ಕೊಯ್ಲಿನ ನಂತರದ ನಿರ್ವಹಣೆಗಾಗಿ ಮೂಲಭೂತ ಸೌಕರ್ಯಗಳನ್ನು ಸ್ಥಾಪಿಸಬಹುದಾಗಿದೆ. ಇದಲ್ಲದೆ, ಉತ್ಪಾದನಾ ವ್ಯವಹಾರಗಳ ಮೂಲಕ ರೈತರು ಉತ್ಪಾದಿಸುವ ಬೆಳೆಗಳಿಗೆ ಸೂಕ್ತ ಬೆಲೆ ದೊರಕಿಸಿ ರೈತರ ಆದಾಯ ಹೆಚ್ಚಿಸಬಹುದಾಗಿದೆ. ರೈತರ ಸಂಘಟನೆ ಹಾಗೂ ಸಾಮರ್ಥ್ಯ ಬಲವರ್ಧನೆ ಮಾಡಲು ರಾಜ್ಯದ 'ರೈತ ಉತ್ಪಾದಕ ಸಂಸ್ಥೆ (FPO) ನೀತಿಯನ್ನು ಜಾರಿಗೆ ತರಲಾಗುವುದು." ಎಂದು ಘೋಷಿಸಲಾಗಿರುತ್ತದೆ.

ರಾಜ್ಯದಲ್ಲಿ ಈಗಾಗಲೇ 300ಕ್ಕೂ ಹೆಚ್ಚಿನ ಸಂಖ್ಯೆಯ ರೈತ ಉತ್ಪಾದಕ ಸಂಸ್ಥೆಗಳು ರಚನೆಯಾಗಿದ್ದು, ಇವುಗಳನ್ನು ಪ್ರಮುಖವಾಗಿ ರಾಷ್ಟ್ರೀಯ ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್) ಹಾಗೂ ರಾಜ್ಯ ತೋಟಗಾರಿಕೆ ಇಲಾಖೆಯಿಂದ ಉತ್ತೇಜಿಸಲಾಗಿವೆ. ರೈತ ಉತ್ಪಾದಕ ಸಂಸ್ಥೆಗಳ ರಚನೆಗೆ ನಬಾರ್ಡ್ ತನ್ನದೇ ಆದಂತಹ ಮಾರ್ಗಸೂಚಿಗಳನ್ನು ಅನುಸರಿಸಿದ್ದು, ತೋಟಗಾರಿಕೆ ಇಲಾಖೆಯು ಭಾರತ ಸರ್ಕಾರದ ಸಣ್ಣ ರೈತರ ಕೃಷಿ ಒಕ್ಕೂಟ (ಎಸ್.ಎಫ್.ಎ.ಸಿ) ಮಾರ್ಗಸೂಚಿಗಳನ್ನು ಅನುಸರಿಸಿದೆ. ರೇಷ್ಮೆ ಇಲಾಖೆಯು ಸಹ ರೈತ ಉತ್ಪಾದಕ ಸಂಸ್ಥೆಗಳನ್ನು ರಚಿಸಲು ತನ್ನದೇ ಮಾರ್ಗಸೂಚಿಗಳನ್ನು ರೂಪಿಸಿಕೊಂಡಿರುತ್ತದೆ. ಸಣ್ಣ ರೈತರ ಕೃಷಿ ಒಕ್ಕೂಟವು (ಎಸ್.ಎಫ್.ಎ.ಸಿ) ಸುಮಾರು 25 ರೈತ ಉತ್ಪಾದಕ ಸಂಸ್ಥೆಗಳನ್ನು ಕೃಷಿ ಇಲಾಖೆಯ ಮುಖಾಂತರ ಹೈದ್ರಾಬಾದ್-ಕರ್ನಾಟಕ ಪ್ರಾಂತ್ಯದಲ್ಲಿ ಅದರಲ್ಲಿಯೂ ಮುಖ್ಯವಾಗಿ ದ್ವಿದಳ ಧಾನ್ಯ (ತೊಗರಿ) ಬೆಳೆಯುವ ಜಿಲ್ಲೆಗಳಲ್ಲಿ ರಚಿಸಿದೆ.

ಸರ್ಕಾರದಿಂದ ಅನುಮೋದನೆಗೊಂಡ ಅಪಾಯ ನಿಧಿ (ರಿಸ್ಕ್ ಫಂಡ್) ಮತ್ತು ಲೇಬಲಿಂಗ್ ಅಭಿವೃದ್ಧಿ ಇತ್ಯಾಧಿ ವಿವಿಧ ಬೆಂಬಲಾತ್ಮಕ ಬದ್ಧತೆಗಳನ್ನೊಳಗೊಂಡಂತೆ ರೈತ ಉತ್ಪಾದಕರ ಸಂಸ್ಥೆಗಳನ್ನು ಬಲಪಡಿಸಲು ಕಾರ್ಯಾಚರಣೆ ಮಾಡಬೇಕಿರುತ್ತದೆ. ರಾಜ್ಯದಲ್ಲಿನ ರೈತ ಉತ್ಪಾದಕ ಸಂಸ್ಥೆಯನ್ನು ರಚಿಸಲು, ಬಲವರ್ಧನೆಗೊಳಿಸಲು ಮತ್ತು ಬೆಂಬಲ ನೀಡಲು ರೈತ ಉತ್ಪಾದಕ ಸಂಸ್ಥೆಗಳ ಉತ್ಕೃಷ್ಟತಾ ಕೇಂದ್ರವನ್ನು ಒಂದು ಸ್ವಾಯತ್ತ ಸಂಸ್ಥೆಯನ್ನಾಗಿ ಸ್ಥಾಪಿಸಲಾಗಿರುತ್ತದೆ.

ಈ ಕುರಿತು ಹಲವಾರು ಸಭೆಗಳಲ್ಲಿ, ವಿವಿಧ ಹಂತಗಳ ಕಾರ್ಯಾಗಾರದಲ್ಲಿ ವಿಸ್ತೃತವಾಗಿ ಚರ್ಚಿಸಿ ರಾಜ್ಯದಲ್ಲಿ ರೈತ ಉತ್ಪಾದಕ ಸಂಸ್ಥೆಗಳ ಉತ್ತೇಜನಕ್ಕೆ ಸಂಬಂಧಿಸಿದ ನೀತಿಯನ್ನು ರೂಪಿಸಬೇಕೆಂದು ನಿರ್ಣಯಿಸಲಾಗಿರುತ್ತದೆ.

ಮೇಲೆ (3)ರಲ್ಲಿ ಓದಲಾದ, ದಿನಾಂಕ 01.03.2018ರ ಕಾರ್ಯಾಗಾರದಲ್ಲಿ ವಿವಿಧ ಪಾಲುದಾರರನ್ನು (ನಬಾರ್ಡ್ ಸಂಸ್ಥೆಯ ಪ್ರತಿನಿಧಿಗಳು, ವಿವಿಧ ಅಭಿವೃದ್ದಿ ಇಲಾಖೆಗಳ ಪ್ರತಿನಿಧಿಗಳು, ಸ್ವಯಂ ವಿಕಸನಗೊಂಡ ರೈತ ಉತ್ಪಾದಕ ಸಂಸ್ಥೆಗಳು, ಹೊರ ರಾಜ್ಯಗಳ ರೈತ ಉತ್ಪಾದಕ ಸಂಸ್ಥೆಗಳು, ಸಂಪನ್ಮೂಲ ಸಂಸ್ಥೆಗಳು/ಸರ್ಕಾರೇತರ ಸಂಸ್ಥೆಗಳು, ಇತ್ಯಾದಿ) ಆಹ್ವಾನಿಸಿ, ರಾಜ್ಯದಲ್ಲಿ ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿಯನ್ನು ರಚಿಸುವ ಕುರಿತು ತೀರ್ಮಾನಿಸಲಾಗಿದೆ.

ಮೇಲೆ (4)ರಲ್ಲಿ ಓದಲಾದ, ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೃಷಿ, ತೋಟಗಾರಿಕೆ, ರೇಷ್ಮೆ, ಪಶು ಸಂಗೋಪನೆ, ಸಹಕಾರ, ಅರಣ್ಯ, ಕೃಷಿ ಮಾರುಕಟ್ಟೆ, ಆರ್ಥಿಕ, ಯೋಜನಾ ಇಲಾಖೆಗಳು, ಕೃಷಿ ವಿಶ್ವವಿದ್ಯಾನಿಲಯ ಮತ್ತು ನಬಾರ್ಡ್ ಸಂಸ್ಥೆಯ ಪ್ರತಿನಿಧಿಗಳು ಇವರಿಂದ ಕರಡು ನೀತಿಯಲ್ಲಿ ಅಳವಡಿಸಬೇಕಾದ ಅಂಶಗಳ ಕುರಿತು ಸಲಹೆ ಮತ್ತು ಅಭಿಪ್ರಾಯವನ್ನು ಪಡೆಯಲಾಗಿರುತ್ತದೆ.

ಮೇಲೆ (5)ರಲ್ಲಿ ಓದಲಾದ, ದಿನಾಂಕ:30.08.2018 ರಂದು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಾಗಾರದಲ್ಲಿ ನಬಾರ್ಡ್ ಸಂಸ್ಥೆಯಿಂದ ಸ್ಥಾಪಿತ ರೈತ ಉತ್ಪಾದಕರ ಸಂಸ್ಥೆಯ ಸದಸ್ಯರುಗಳು, ಸಣ್ಣ ರೈತರ ಕೃಷಿ ಒಕ್ಕೂಟ (ಎಸ್.ಎಫ್.ಎ.ಸಿ), ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗಳೊಂದಿಗೆ ಸಂಬಂಧಪಟ್ಟ ಇಲಾಖೆಗಳು/ಸಂಸ್ಥೆಯ ಮುಖ್ಯಸ್ಥರುಗಳು, ಸಂಪನ್ಮೂಲ ಸಂಸ್ಥೆಯ ಪ್ರತಿನಿಧಿಗಳು ಹಾಗೂ ಸರ್ಕಾರೇತರ ಸಂಸ್ಥೆಗಳೊಂದಿಗೆ ರೈತ ಉತ್ಪಾದಕರ ಸಂಸ್ಥೆಯ ನೀತಿ ಕುರಿತು ಸಂವಾದ ನಡೆಸಲಾಗಿರುತ್ತದೆ.

ರೈತ ಉತ್ಪಾದಕ ಸಂಸ್ಥೆಗಳ ರಚನೆಯನ್ನು ಕೃಷಿ, ತೋಟಗಾರಿಕೆ, ರೇಷ್ಮೆ, ಪಶು ಸಂಗೋಪನೆ, ಕೃಷಿ ಅರಣ್ಯ, ಮೀನುಗಾರಿಕೆ ಹಾಗೂ ತತ್ಸಂಬಂಧಿತ ಕ್ಷೇತ್ರಗಳಲ್ಲಿ ಪ್ರೋತ್ಸಾಹಿಸಲು ಮೇಲೆ (2) ರಲ್ಲಿ ಓದಲಾದ ಜಲಾನಯನ ಅಭಿವೃದ್ಧಿ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿನ ಸಮಿತಿಯು ಅಭಿವೃದ್ಧಿ ಪಡಿಸಿದ ಕರಡು ನೀತಿಯನ್ನು ಮೇಲೆ (5)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಸರ್ಕಾರದ ಅನುಮೋದನೆಗೆ ಮಂಡಿಸಲಾಗಿರುತ್ತದೆ. ಮುಂದುವರೆದು, ರೈತ ಉತ್ಪಾದಕರ ಸಂಸ್ಥೆಯ ರಚನೆ, ಬಲವರ್ಧನೆ ಮತ್ತು ಬೆಳವಣಿಗೆ ಹಾಗೂ ನೋಡಲ್ ಸಂಸ್ಥೆ, ಯೋಜನಾ ಮೇಲ್ವಿಚಾರಣಾ ಘಟಕದ ವೆಚ್ಚ, ರೈತ ಉತ್ಪಾದಕ ಸಂಸ್ಥೆಯ ಪೋರ್ಟಲ್‌ನ ರಚನೆ, ಈಗಾಗಲೇ ಸ್ಥಾಪಿತವಾಗಿರುವ ರೈತ ಉತ್ಪಾದಕ ಸಂಸ್ಥೆ ಇತ್ಯಾದಿಗಳಿಗೆ ವಾರ್ಷಿಕವಾಗಿ ರೂ.100.00 ಕೋಟಿಗಳ ಅನುದಾನದ ಅವಶ್ಯಕತೆ ಇರುತ್ತದೆ. ಈ ಸಂಬಂಧ, ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ

ಅಡಿಯಿಂದ ಕನಿಷ್ಟ ಶೇ.50 ರಷ್ಟು ಅನುದಾನವನ್ನು ಹಾಗೂ ಉಳಿದ ಶೇ.50 ರಷ್ಟು ಅನುದಾನವನ್ನು ರಾಜ್ಯದ ವಾರ್ಷಿಕ ಆಯವ್ಯಯದಲ್ಲಿ ಅವಕಾಶ ಕಲ್ಪಿಸಬಹುದಾಗಿದೆ ಎಂದು ಪ್ರಸ್ತಾಪಿಸಲಾಗಿರುತ್ತದೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 92 ಕೃಉಇ 2018, ಬೆಂಗಳೂರು, ದಿನಾಂಕ: 17.01.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನಿಂದ ಜಾರಿಗೆ ಬರುವಂತೆ, ರಾಜ್ಯದಲ್ಲಿ **ಕರ್ನಾಟಕ ರೈತ ಉತ್ಪಾದಕರ ಸಂಸ್ಥೆಗಳ ನೀತಿ 2018** (Karnataka Farmer Producer Organizations (FPOs) Policy2018) ಅನ್ನು **ಅನುಬಂಧ-1**ರಲ್ಲಿ ಲಗತ್ತಿಸಿರುವಂತೆ ಜಾರಿಗೆ ತರಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿರುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 769 ವೆಚ್ಚ-4/2018, ದಿನಾಂಕ: 01.01.2019, ಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 4 ಪಿಎಫ್‌ಒ 2019, ದಿನಾಂಕ: 07.01.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

**(ಬಿ.ಎಸ್. ನಾಗರತ್ನಮ್ಮ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)
17/01/19

ಕಂಪೈಲರ್, ಕರ್ನಾಟಕ ಗೆಜೆಟ್, ಬೆಂಗಳೂರು, ಇವರು ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕ್ರಮ ತೆಗೆದುಕೊಳ್ಳುವುದು.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
8. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
9. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.

10. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
11. ಆಯುಕ್ತರು, ರೇಷ್ಮೇ ಇಲಾಖೆ ಬೆಂಗಳೂರು.
12. ಆಯುಕ್ತರು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು
13. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಧಾರವಾಡ ಮತ್ತು ರಾಯಚೂರು.
14. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ
15. ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ.
16. ಕುಲಪತಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ವಿಶ್ವವಿದ್ಯಾಲಯ, ಬೀದರ್.
17. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
18. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
19. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
20. ಸಚಿವ ಸಂಪುಟ ಶಾಖೆ, ವಿಧಾನಸೌಧ, ಪ್ರಕರಣ ಸಂಖ್ಯೆ: ಸಿ:28/2019, ದಿನಾಂಕ: 10.01.2019.
21. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
22. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು
23. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
24. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಕೃಇ 92 ಕೃಉಇ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31.07.2019.

## ತಿದ್ದುಪಡಿ ಆದೇಶ

ವಿಷಯ: ಕರ್ನಾಟಕ ರೈತ ಉತ್ಪಾದಕ ಸಂಸ್ಥೆಗಳ ನೀತಿ–2018 (Karnataka Farmer Producer Organizations (FPOs) Policy 2018).

ಸರ್ಕಾರದ ಆದೇಶ ಸಂಖ್ಯೆ: ಕೃಇ 92 ಕೃಉಇ 2018, ದಿನಾಂಕ: 17.01.2019ರ "ಕರ್ನಾಟಕ ರೈತ ಉತ್ಪಾದಕ ಸಂಸ್ಥೆಗಳ ನೀತಿ–2018" ರಲ್ಲಿ **"ಕರ್ನಾಟಕ ರೈತ ಉತ್ಪಾದಕ ಸಂಸ್ಥೆಗಳನ್ನು ಕಂಪನಿ ಕಾಯ್ದೆ–2013 ರಡಿ ನೋಂದಾಯಿಸಲು ಅವಕಾಶ ಕಲ್ಪಿಸಲಾಗಿದ್ದು"** ಎಂದು ತಿಳಿಸಿದ್ದು, ಸದರಿ ತಿಳಿಸಿರುವ ಜಾಗಗಳಲ್ಲಿ **"ಕರ್ನಾಟಕ ರೈತ ಉತ್ಪಾದಕ ಸಂಸ್ಥೆಗಳನ್ನು ಕಂಪನಿ ಕಾಯ್ದೆ–2013 ಅಥವಾ ಕೋ-ಆಪರೇಟಿವ್ ಸೊಸೈಟಿ ಕಾಯ್ದೆ ಅಥವಾ ಟ್ರಸ್ಟ್ ಕಾಯ್ದೆ ಅಡಿಯಲ್ಲಿ ನೋಂದಾಯಿಸಲು ಅವಕಾಶ ಕಲ್ಪಿಸಲಾಗಿದೆ"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಉಳಿದಂತೆ ದಿನಾಂಕ: 17.01.2019ರ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)
31/07/19

ಕಂಪೈಲರ್, ಕರ್ನಾಟಕ ಗೆಜೆಟ್, ಬೆಂಗಳೂರು, ಇವರು ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕ್ರಮ ತೆಗೆದುಕೊಳ್ಳುವುದು.

<u>ಇವರಿಗೆ:–</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
8. ಕೃಷಿ ಆಯುಕ್ತರು./ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.